**ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ**
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆಯ ಸಮಿತಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE 11/11/20

# ವಿಧಾನ ಮಂಡಲ 9 ಸ್ಥಾಯಿ ಸಮಿತಿಗೆ ಅಧ್ಯಕ್ಷ, ಸದಸ್ಯರ ನೇಮಿಸಿ ಸ್ಪೀಕರ್ ಆದೇಶ

## ಸಾರ್ವಜನಿಕ ಲೆಕ್ಕಪತ್ರಗಳ ಸ್ಥಾಯಿ ಸಮಿತಿಗೆ ರಾಮಲಿಂಗಾರೆಡ್ಡಿ ನೇಮಕ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 11/11/20

ವಿಧಾನಮಂಡಲದ ಒಂಬತ್ತು ವಿವಿಧ ಸ್ಥಾಯಿ ಸಮಿತಿಗಳಿಗೆ ಪ್ರಸಕ್ತ (2020-21) ಸಾಲಿನ ಅಧ್ಯಕ್ಷರು ಹಾಗೂ ಸದಸ್ಯರನ್ನು ನೇಮಕ ಮಾಡಿ ವಿಧಾನಸಭೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಆದೇಶ ಹೊರಡಿಸಿದ್ದಾರೆ.

ಸಾರ್ವಜನಿಕ ಲೆಕ್ಕಪತ್ರಗಳ ಸ್ಥಾಯಿ ಸಮಿತಿಗೆ ಶಾಸಕ ರಾಮಲಿಂಗಾರೆಡ್ಡಿ, ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಅರವಿಂದ ಲಿಂಬಾವಳಿ, ಅನುಸೂಚಿತ ಜಾತಿ ಹಾಗೂ ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಎಸ್.ಅಂಗಾರ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ದಿನಕರ್ ಕೇಶವ ಶೆಟ್ಟಿ, ಅಧೀನ ಶಾಸನ ರಚನಾ ಸಮಿತಿಗೆ ಎಸ್.ಕುಮಾರ್ ಬಂಗಾರಪ್ಪ, ಸಭೆಯ ಮುಂದಿಡಲಾದ ಕಾಗದಪತ್ರಗಳ ಸಮಿತಿಗೆ ಸಾ.ರಾ.ಮಹೇಶ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಗೆ ಕೆ.ಪೂರ್ಣಿಮಾ, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಗೆ ಜಿ.ಸೋಮಶೇಖರ್ ರೆಡ್ಡಿ ಅವರನ್ನು ನೇಮಕ ಮಾಡಲಾಗಿದೆ.

ಇನ್ನು ಗ್ರಂಥಾಲಯ ಸಮಿತಿಯಲ್ಲಿ ವಿಧಾನಸಭೆ ಸಭಾಧ್ಯಕ್ಷರು ಹಾಗೂ ವಿಧಾನ ಪರಿಷತ್‌ನ ಸಭಾಪತಿಗಳು ಸದಸ್ಯರಾಗಿರುವುದರಿಂದ ನಿಯಮಗಳ ಪ್ರಕಾರ ಗ್ರಂಥಾಲಯ ಸಮಿತಿಗೆ ವಿಧಾನಪರಿಷತ್ ಸಭಾಪತಿಗಳನ್ನು ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ ಎಂದು ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ತಿಳಿಸಿದ್ದಾರೆ.

### ವಿಧಾನಸಭೆಯ ವಿವಿಧ ಸಮಿತಿಗಳು

ಇನ್ನು ವಿಧಾನಸಭೆಯ ಸಮಿತಿಗಳ ಪೈಕಿ ಅಂದಾಜುಗಳ ಸಮಿತಿಗೆ ಅಭಯ ಪಾಟೀಲ್, ಸರ್ಕಾರಿ ಭರವಸೆಗಳ ಸಮಿತಿಗೆ ಕೆ.ರಘುಪತಿ ಭಟ್, ಹಕ್ಕು ಬಾಧ್ಯತೆಗಳ ಸಮಿತಿಗೆ ಬಸನಗೌಡ ಆರ್.ಪಾಟೀಲ್ (ಯತ್ನಾಳ್), ಖಾಸಗಿ ಸದಸ್ಯರ ವಿಧೇಯಕ, ನಿರ್ಣಯಗಳ ಸಮಿತಿ, ಅರ್ಜಿಗಳ ಸಮಿತಿ ಹಾಗೂ ವಸತಿ ಸೌಕರ್ಯ ಸಮಿತಿಗಳಿಗೆ ವಿಶ್ವನಾಥ್ ಮಾಮನಿ ಅವರನ್ನು ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ.